ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ರಾಜ್ಯದಲ್ಲಿನ ಹೆಣ್ಣು ಮಕ್ಕಳ ಮೇಲಿನ ಲೈಂಗಿಕ ಅಪರಾಧ ಹಾಗೂ ದೌರ್ಜನ್ಯ ಬಗ್ಗೆ

ಶ್ರೀಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

746 (1023) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಅಪ್ರಾಪ್ತ ಮಕ್ಕಳನ್ನು ಒಳಗೊಂಡಂತೆ ಹೆಣ್ಣು ಮಕ್ಕಳ ಮೇಲೆ ಲೈಂಗಿಕ ಅಪರಾಧ ಹಾಗೂ ಶೋಷಣೆಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇಲ್ಲಿಯವರೆಗೆ ರಾಜ್ಯದಲ್ಲಿ ಎಷ್ಟು ಲೈಂಗಿಕ ಅಪರಾಧ ಹಾಗೂ ಶೋಷಣೆ ಪ್ರಕರಣಗಳು ದಾಖಲಾಗಿವೆ ;

(ಇ) ಇಂತಹ ಘಟನೆಗಳಿಂದ ಹೆಣ್ಣು ಮಕ್ಕಳನ್ನು ರಕ್ಷಿಸಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಈ) ಇಲ್ಲಿಯವರೆಗೆ ಎಷ್ಟು ಜನರನ್ನು ಅಪರಾಧಿಗಳೆಂದು ಪರಿಗಣಿಸಲಾಗಿದೆ; ಎಷ್ಟು ಜನರಿಗೆ ಶಿಕ್ಷೆ ವಿಧಿಸಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)